RNU AIR DHARWAD

# DECEMBER 24, 2025
# AKASHAVANI - DHARWAD
# PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ, ಕಲಬುರಗಿಯಲ್ಲಿ, ರಾಜ್ಯ ಉದ್ಯೋಗಿಗಳ ಜೀವ ವಿಮಾ ಮಂಡಳಿ– ಇ.ಎಸ್.ಐ.ಸಿ ಆಸ್ಪತ್ರೆ ಹಾಗೂ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಪಾಲ್ಗೊಂಡ, ಕೇಂದ್ರ ಸೂಕ್ಷ್ಮ, ಸಣ್ಣ, ಮಧ್ಯಮ ಕೈಗಾರಿಕೆ ಖಾತೆ ಸಚಿವರಾದ ಶೋಭಾ ಕರಂದ್ಲಾಜೆ ನೂತನ ಆಟದ ಮೈದಾನ, ಮೇಲ್ಛಾವಣಿ ಸೌರ ವಿದ್ಯುತ್ ಫಲಕ, ಅಂತರ್ಜಲ ಮರುಪೂರಣ ಸೌಲಭ್ಯ ಸೇರಿದಂತೆ, ಪುರುಷರು ಹಾಗೂ ಮಹಿಳೆಯರ ಜಿಮ್ ವ್ಯವಸ್ಥೆಗಳನ್ನು ಉದ್ಘಾಟಿಸಿದರು. ಉತ್ತಮ ಆರೋಗ್ಯ ಮೂಲಸೌಕರ್ಯಗಳನ್ನು ಕಲ್ಪಿಸುತ್ತಿರುವ ಆಸ್ಪತ್ರೆ, ಗುಣಮಟ್ಟದ ಸೇವೆ ಒದಗಿಸುವಲ್ಲಿ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದರು.

<><><>

ಧಾರವಾಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯ, ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ, 'ಸಂಸದ ಕ್ರೀಡಾ ಮಹೋತ್ಸವ – 2025' ನಾಳೆಯಿಂದ ಆರಂಭಗೊಳ್ಳಲಿದೆ. ದೇಶದ ಯುವಕರಲ್ಲಿ ಕ್ರೀಡೆ, ಸಾಂಸ್ಕೃತಿಕ ಮತ್ತು ನಾಯಕತ್ವವನ್ನು ಉತ್ತೇಜಿಸುವ ಸಲುವಾಗಿ, ಪ್ರತಿಯೊಂದು ಲೋಕಸಭಾ ಕ್ಷೇತ್ರಗಳಲ್ಲಿ 'ಸಂಸದ್ ಕ್ರೀಡಾ ಮಹೋತ್ಸವವನ್ನು, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಮಾರ್ಗದರ್ಶನದಲ್ಲಿ ಆಯೋಜಿಸಲಾಗುತ್ತಿದೆ. ಧಾರವಾಡದಲ್ಲಿ ಆಯೋಜಿತ ಸಂಸದ ಖೇಲ್ ಮಹೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯ, ಕ್ರೀಡಾ ಆಸಕ್ತರು ಪಾಲ್ಗೊಳ್ಳುವಂತೆ, ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಮ್ಮ ಎಕ್ಸ್ ಖಾತೆ ಮೂಲಕ ಕೋರಿದ್ದಾರೆ. .

<><><>

ಸಚಿವ ಪ್ರಲ್ಹಾದ್ ಜೋಶಿ 39 ಸೆಕೆಂದುಗಳು

<><><>

ಇಂದು ರಾಷ್ಟ್ರೀಯ ಗ್ರಾಹಕ ದಿನಾಚರಣೆ, 'ಡಿಜಿಟಲ್ ವ್ಯವಸ್ಥೆ ಮೂಲಕ ನ್ಯಾಯದ ಪರಿಣಾಮಕಾರಿ ಮತ್ತು ತ್ವರಿತ ವಿಲೇವಾರಿ' ಎಂಬುದು ಈ ಬಾರಿಯ ಘೋಷವಾಕ್ಯವಾಗಿದೆ. ಬೆಂಗಳೂರು ಕಬ್ಬನ್ ಉದ್ಯಾನವನದ, ಸರ್ಕಾರಿ ನೌಕರರ ಸಂಘದಲ್ಲಿ, ರಾಜ್ಯ ಮಟ್ಟದ, ರಾಷ್ಟ್ರೀಯ ಗ್ರಾಹಕ ದಿನಾಚರಣೆ–2025 ಆಯೋಜಿತವಾಗಿದೆ.

<><><>

ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಿಂದ ಸಂಶೋಧನೆ ನಡೆಸಿ, ಅಭಿವೃದ್ಧಿಪಡಿಸಿದ ಅಧಿಕ ಇಳುವರಿ ನೀಡುವ ತಳಿಗಳನ್ನು ರೈತರಿಗೆ ಪೂರೈಸುವ ಜೊತೆಗೆ, ಆಧುನಿಕ ಕೃಷಿ ಮಾರ್ಗದರ್ಶನವನ್ನು ನೀಡಲಾಗುತ್ತಿದೆ ಎಂದು ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿತ ರೈತ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೃಷಿ ಮೌಲ್ಯವರ್ಧನೆ ಮಾಡುವ ನಿಟ್ಟಿನಲ್ಲಿ, ಕೃಷಿ ಮಾರುಕಟ್ಟೆ ವ್ಯವಸ್ಥೆಯೊಂದಿಗೆ, ಸಮಗ್ರ ಕೃಷಿ, ಸಾವಯವ ಕೃಷಿ ಹಾಗೂ ಸುಸ್ಥಿರ ಕೃಷಿ ಕಾರ್ಯಗಳಿಗೆ ಅಗತ್ಯವಾದ ಸೌಲಭ್ಯಗಳನ್ನು ಒದಗಿಸಲಾಗಿದೆ. ಯಂತ್ರೋಪಕರಣ ಖರೀದಿಗಾಗಿ, ರೈತರಿಗೆ ಸಾವಿರದ 500 ಕೋಟಿ ರೂಪಾಯಿಗಳಿಗೂ ಹೆಚ್ಚು ಸಹಾಯಧನವನ್ನು ಒದಗಿಸಲಾಗಿದೆ ಎಂದರು.

<><><>

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಕಲಬುರಗಿ ಕೃಷಿ ಮಹಾವಿದ್ಯಾಲಯ ಸಹಯೋಗದೊಂದಿಗೆ, 16ನೇ ಅಂತರ ಕೃಷಿ ಮಹಾವಿದ್ಯಾಲಯಗಳ ಯುವಜನೋತ್ಸವ "ಕಲಾ ಸಂಗಮ" ಕಾರ್ಯಕ್ರಮ, ಇದೇ ತಿಂಗಳ 26 ರಿಂದ ಮೂರು ದಿನಗಳ ಕಾಲ, ಕಲಬುರಗಿ ಕೃಷಿ ಮಹಾವಿದ್ಯಾಲಯದ ಪ್ರೇಕ್ಷಾಗೃಹದಲ್ಲಿ ಆಯೋಜಿತವಾಗಿದೆ. ಯುವಜನೋತ್ಸವದ ಅಂಗವಾಗಿ, ಆಯೋಜಿತ ಮೆರವಣಿಗೆಯನ್ನು, ಅಂದು ಬೆಳಗ್ಗೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಉದ್ಘಾಟಿಸಲಿದ್ದಾರೆ.

<><><>

ಶಿವಮೊಗ್ಗ ನಗರದ ಕೆ.ಎಸ್.ಆರ್.ಟಿ.ಸಿ ಹಾಗೂ ಖಾಸಗಿ ಬಸ್ ನಿಲ್ದಾಣದ ಬಳಿ, ಪ್ರಯಾಣಿಕರ ಸುಗಮ ಪ್ರಯಾಣಕ್ಕೆ ಅನುಕೂಲವಾಗುವಂತೆ, ನೂತನ ಆಟೋ ರಿಕ್ಷಾ ಪ್ರೀ ಪೈಯ್ಡ್ ಕೌಂಟರಗಳನ್ನು ತೆರೆಯಲಾಗುವುದು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಟೋ ರಿಕ್ಷಾ ಸಂಘಗಳು ಮತ್ತು ಪ್ರಾದೇಶಿಕ ಸಾರಿಗೆ ಪ್ರಾಧಿಕಾರಿದ ಅಧಿಕಾರಿಗಳೊಂದಿಗೆ ಆಯೋಜಿಸಿದ್ದ ಸಭೆಯಲ್ಲಿ ಅವರು ಈ ಮಾಹಿತಿ ನೀಡಿದರು.

<><><>

ಆಂಧ್ರಪ್ರದೇಶದ ಶ್ರೀಹರಿಕೋಟಾದಿಂದ, ಇಂದು ಬೆಳಗ್ಗೆ, ಉಡಾವಣೆಗೊಂಡ ಬ್ಲೂ ಬರ್ಡ್ ಬ್ಲಾಕ್ –2 ಮಿ ’ನ್ ಯಶಸ್ವಿಯಾಗಿದ್ದು, ಉಪಗ್ರಹವು ನಿಗದಿತ ಕಕ್ಷೆಗೆ ಸೇರಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಅಧ್ಯಕ್ಷ, ಡಾಕ್ಟರ ವಿ. ನಾರಾಯಣನ್ ತಿಳಿಸಿದ್ದಾರೆ. ಉಡಾವಣಾ ವಾಹಕವು, ಬ್ಲೂಬರ್ಡ್ ಬ್ಲಾಕ್ 2 ಸಂವಹನ ಉಪಗ್ರಹವನ್ನು ಉದ್ದೇಶಿತ ಕಕ್ಷೆಗೆ ಯಶಸ್ವಿಯಾಗಿ ಮತ್ತು ನಿಖರವಾಗಿ ಸೇರಿಸಿರುವ, ಇಸ್ರೋ ಕಾರ್ಯವು ಆತ್ಮನಿರ್ಭರ ಭಾರತ ಪಯಣದ ಪ್ರತಿಫಲನವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಶ್ಲಾಘಿಸಿದ್ದಾರೆ.

<><><>

ಬಳ್ಳಾರಿ ಜಿಲ್ಲೆ, ಸಿರುಗುಪ್ಪ ತಾಲೂಕಿನ ದೇವಿ ನಗರದ ಬಳಿ, ಇಂದು ಮುಂಜಾನೆ ಸಂಭವಿಸಿದ ರಸ್ತೆ ಅಪಘಾತದಲ್ಲಿ, ಕಾರು ಚಾಲಕ ಸೇರಿದಂತೆ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗಾಯಗೊಂಡ ಇಬ್ಬರನ್ನು ಬಳ್ಳಾರಿಯ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ದಾಖಲಿಸಲಾಗಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ ತಿಂಗಳ 28 ರಂದು ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶದ ಜನತೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನದ ಮಾತು ಬಾನುಲಿ ಭಾಷಣದ 129 ನೇ ಆವೃತ್ತಿಯಾಗಿದೆ. ಜನತೆ ಟೋಲ್ ಫ್ರೀ ಸಂಖ್ಯೆ 1800–11–7800 ಮೂಲಕ, ಈ ಕಾರ್ಯಕ್ರಮಕ್ಕೆ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಸಲ್ಲಿಸಬಹುದಾಗಿದೆ. 'ಮೋದಿ ಅಪ್ಲಿಕೇಶನ್ ಅಥವಾ 'ಮೈ ಗೌವ್' ಓಪನ್ ಫೋರಂ ಮೂಲಕ, ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಡಿಸೆಂಬರ್ 26 ಕೊನೆಯ ದಿನವಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>